# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 512
ಸದಸ್ಯರ ಹೆಸರು : ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 13-12-2018
ಉತ್ತರಿಸುವ ಸಚಿವರು : ಮುಖ್ಯಮಂತ್ರಿಯವರು.

| | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಎಷ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿವೆ; | 1231 |
| ಆ. | ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಮಂಜೂರಾಗಿರುವ ದೈಹಿಕ ಶಿಕ್ಷಕರ ಹುದ್ದೆಗಳೆಷ್ಟು; | 20 |
| ಇ. | ಪ್ರತಿಯೊಂದು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಒಂದು ದೈಹಿಕ ಶಿಕ್ಷಕರ ಹುದ್ದೆಗಳನ್ನು ಸೃಜಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ಹಾಗೂ ಈ ಹುದ್ದೆಗಳನ್ನು ಅತಿ ಶೀಘ್ರವಾಗಿ ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು? | ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಈ ಕೆಳಕಂಡಂತೆ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ಮಂಜೂರು ಮಾಡುವ ಬಗ್ಗೆ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.<br><br>1) ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪೈಕಿ 500 ಕ್ಕಿಂತ ಹೆಚ್ಚಿನ ವಿದ್ಯಾರ್ಥಿಗಳಿರುವ 18 ಕಾಲೇಜುಗಳಲ್ಲಿ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಯನ್ನು ಸೃಜಿಸಲು;<br>2) ಪ್ರೌಢ ಶಾಲಾ ವಿಭಾಗ ಹಾಗೂ ಪದವಿ ಪೂರ್ವ ವಿಭಾಗಗಳೆರಡರಲ್ಲೂ ಸೇರಿ 500ಕ್ಕಿಂತ ಹೆಚ್ಚಿನ ವಿದ್ಯಾರ್ಥಿಗಳಿರುವ ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜುಗಳ, ಪ್ರೌಢ ಶಾಲಾ ವಿಭಾಗದಲ್ಲಿನ 169 ದೈಹಿಕ ಶಿಕ್ಷಕರ ಹುದ್ದೆಯನ್ನು ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಯನ್ನಾಗಿ ಮೇಲ್ದರ್ಜೆಗೇರಿಸುವುದು, ಹಾಗೂ ಹೀಗೆ ಮೇಲ್ದರ್ಜೆಗೇರಿಸಲ್ಪಟ್ಟ ಉಪನ್ಯಾಸಕರು ಪ್ರೌಢ ಶಾಲೆ ಮತ್ತು ಪದವಿ ಪೂರ್ವ ವಿಭಾಗಗಳೆರಡರ ವಿದ್ಯಾರ್ಥಿಗಳಿಗೆ ದೈಹಿಕ ಶಿಕ್ಷಣವನ್ನು ಬೋಧಿಸಲು ಅವಕಾಶ ಕಲ್ಪಿಸುವುದು;<br>3) 500ಕ್ಕಿಂತ ಕಡಿಮೆ ವಿದ್ಯಾರ್ಥಿಗಳಿರುವ 899 ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಪ್ರೌಢ ವಿಭಾಗದ ದೈಹಿಕ |

| | | |
|---|---|---|
| | | ಶಿಕ್ಷಕರ ಹುದ್ದೆಯನ್ನು ಮುಂದುವರೆಸಿ, ಸದರಿ ಉಪನ್ಯಾಸಕರು ಪ್ರೌಢ ಮತ್ತು ಪದವಿ ಪೂರ್ವ ವಿಭಾಗಗಳ ದೈಹಿಕ ಶಿಕ್ಷಣ ತರಗತಿಗಳನ್ನು ನಡೆಸಲು ಅವಕಾಶ ಕಲ್ಪಿಸುವುದು.<br><br>ಈಗಾಗಲೇ ಮಂಜೂರಾಗಿರುವ 20 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳ ಪೈಕಿ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿನ ನೇರ ನೇಮಕಾತಿ ಕೋಟಾದ 10 ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರದ ಪತ್ರ ಸಂಖ್ಯೆ:ಇಡಿ 129 ಟಿಪಿಯು 2014 ದಿನಾಂಕ:20-11-2017ರಲ್ಲಿ ಸರ್ಕಾರದ ಅನುಮತಿ ನೀಡಲಾಗಿದೆ. ಅದರಂತೆ, ಸದರಿ 10 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ಆಯ್ಕೆ ಪಟ್ಟಿಯನ್ನು ಸಲ್ಲಿಸುವಂತೆ ದಿನಾಂಕ:22-01-2018ರಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಪತ್ರ ಬರೆಯಲಾಗಿದೆ.<br><br>ಬಡ್ತಿ ಕೋಟಾದ 10 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ಅರ್ಹ ಪ್ರೌಢ ಶಾಲಾ ದೈಹಿಕ ಶಿಕ್ಷಕರಿಂದ ಬಡ್ತಿ ನೀಡಿ ತುಂಬಿಕೊಳ್ಳುವ ಬಗ್ಗೆ ಕ್ರಮವಹಿಸಲಾಗುತ್ತಿದೆ. |

**ಸಂಖ್ಯೆ: ಇಡಿ 341 ಡಿಜಿಡಬ್ಲ್ಯೂ 2018**

(ಹೆಚ್.ಡಿ.ಕುಮಾರಸ್ವಾಮಿ)
ಮುಖ್ಯಮಂತ್ರಿ.